ಬೇಲೂರು ನಗರಕ್ಕೆ ಕೆ.ಎಸ್. ಆರ್.ಟಿ.ಸಿ. ಬಸ್ ಘಟಕ ಮಂಜೂರಾತಿ

924 (1371) ಶ್ರೀ ವೈ.ಎನ್. ರುದ್ರೇಶಗೌಡ (ಬೇಲೂರು) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೇಲೂರು ತಾಲ್ಲೂಕಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಡಿಪೋ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬೇಲೂರು ನಗರದ ಸಮೀಪ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಬಸ್ ಡಿಪೋಗಾಗಿ ಜಮೀನು ಖರೀದಿಸಿರುವುದು ನಿಜವೇ;

ಇ) ಜಮೀನು ಖರೀದಿಸಿದ್ದಲ್ಲಿ, ಬಸ್ ಡಿಪೋ ಮಂಜೂರು ಮಾಡಲು ಸರ್ಕಾರದಿಂದ ವಿಳಂಬವಾಗಿರಲು ಕಾರಣವೇನು?

ಶ್ರೀ ಆರ್. ಅಶೋಕ (ಸಾರಿಗೆ ಸಚಿವರು) :

ಅ) ಹೌದು.

ಆ) ಮತ್ತು ಇ) ಸಾರಿಗೆ ಸಂಸ್ಥೆಯ ಮುಂದಿನ ದಿನಗಳ ಸಾರಿಗೆ ಅವಶ್ಯಕತೆಗೆ ಅನುಗುಣವಾಗಿ ಬೇಲೂರು ನಗರದಲ್ಲಿ ಸರ್ವೆ ಸಂಖ್ಯೆ: 148, 161 ಹಾಗೂ 102 ರಲ್ಲಿ 3 ಎಕರೆ 19 ಗುಂಟೆ ನಿವೇಶನವನ್ನು ನೀರಾವರಿ ಇಲಾಖೆಯಿಂದ ಭೂಸ್ವಾದೀನಪಡಿಸಿಕೊಳ್ಳಲು ಕ್ರಮ ಜರುಗಿಸಲಾಗುತ್ತಿದ್ದು, ಸದರಿ ಪ್ರಕ್ರಿಯೆಗಳು ಅಂತಿಮ ಹಂತದಲ್ಲಿರುತ್ತವೆ. ಸಾರಿಗೆ ಸಂಸ್ಥೆಯ ಮುಂದಿನ ದಿನಗಳ ಸಾರಿಗೆ ಅವಶ್ಯಕತೆ ಹಾಗೂ ಆರ್ಥಿಕ ಲಭ್ಯತೆಗೆ ಅನುಗುಣವಾಗಿ ಈ ಬಗ್ಗೆ ಮುಂದಿನ ಕ್ರಮ ಜರುಗಿಸಲಾಗುವುದು.

ಅಂಗನವಾಡಿ ಕೇಂದ್ರಗಳಲ್ಲಿ ಪೌಷ್ಠಿಕ ಆಹಾರ ತಯಾರಿಸುವುದು

927 (1129) ಶ್ರೀ ಶಿವಲಿಂಗೆಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಂಗನವಾಡಿ ಕೇಂದ್ರಗಳಿಗೆ ಪೌಷ್ಠಿಕ ಆಹಾರ ತಯಾರಿಸಲು ಸ್ತ್ರೀ ಶಕ್ತಿ ಸಂಘಗಳ ಮುಖಾಂತರ ನಡೆಸಬೇಕೆಂದು ಸುಪ್ರೀಂ ಕೋರ್ಟಿನಲ್ಲಿ ತೀರ್ಪು ಬಂದಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಸ್ತ್ರೀ ಶಕ್ತಿ ಸಂಘಕ್ಕೆ ವಹಿಸಿಕೊಡದಿರಲು ಕಾರಣಗಳೇನು;